ಕಳ್ಳನ ಜಾಗದಲ್ಲಿ ನಿಂತು ಊರಿಗೆಲ್ಲ ಗೀತೆ ಬೋಧನೆ

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪ

ಬೆಂಗಳೂರು: ಸಿಎಂ ಸಿದ್ದರಾಮಯ್ಯ ಅವರ 40 ವರ್ಷಗಳ ರಾಜಕೀಯ ಜೀವನದಲ್ಲಿ ಒಂದೇ ಒಂದು ಕಪ್ಪುಚುಕ್ಕೆ ಇಲ್ಲವೆನ್ನುವ ನೀವು, ವೈಟ್ನರ್ ಉಜ್ಜಿ ಕಪ್ಪುಚುಕ್ಕೆ ತೆಗೆಯುವ ವ್ಯರ್ಥ ಪ್ರಯತ್ನ ಮಾಡಿದ್ದೇಕೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಸಿಎಂ ಸಿದ್ದರಾಮಯ್ಯ ಅವರಿಗೆ ನೇರ ಪ್ರಶ್ನೆ ಕೇಳಿದರು.

ತಮ್ಮ ಬಗ್ಗೆ ಎಕ್ಸ್ ಖಾತೆಯಲ್ಲಿ ಅವಹೇಳನಕಾರಿ ಪೋಸ್ಟ್ ಮಾಡಿದ್ದ ಸಿದ್ದರಾಮಯ್ಯ ಅವರಿಗೆ ತಿರುಗೇಟು ನೀಡಿದ ಎಚ್‌ಡಿಕೆ ಕಳ್ಳನ ಜಾಗದಲ್ಲಿ ನಿಂತು ಊರಿಗೆಲ್ಲ ಗೀತೆ ಬೋಧಿಸುತ್ತಿದ್ದೀರಿ ಎಂದು ಲೇವಡಿ ಮಾಡಿದ್ದಾರೆ.

ನಿಮ್ಮ ವಿರುದ್ಧ ಬಂದ ಮೂಡಾ ಕೊಚ್ಚೆಯ ಗಮನ ಬೇರೆಡೆಗೆ ಸೆಳೆಯುವ ನಿಮ್ಮ ಹುನ್ನಾರ ನನಗೆ ಅರ್ಥವಾಗುತ್ತದೆ. ಹೇಗಾದರೂ ಅಧಿಕಾರದಲ್ಲೇ ಉಳಿದು ಲೂಟಿ ಹೊಡೆಯಬೇಕೆನ್ನುವ ನಿಮ್ಮ ಧನದಾಹದ ಹಪಾಹಪಿಯನ್ನೂ ಅರ್ಥ ಮಾಡಿಕೊಳ್ಳಬಲ್ಲೆ. ಕಳ್ಳನ ಜಾಗದಲ್ಲಿ ನಿಂತು ಊರಿಗೆಲ್ಲ ಗೀತೆ ಬೋಧಿಸುವ ನಿಮ್ಮ ಪ್ರಾರಬ್ಧ ಎಂಥಾ ಕೀಳುಮಟ್ಟಕ್ಕೆ ಇಳಿದಿದೆ ಎನ್ನುವುದನ್ನೂ ಅರ್ಥ ಮಾಡಿಕೊಂಡಿದ್ದೇನೆ. ಎಷ್ಟೇ ಆದರೂ ನೀವು ಸಕಲ ಕಲೆಗಳ ಸಿದ್ದಕರ್ಮಿ, ಇಂಥ ಗಲೀಜು ಕೆಲಸ ನಿಮಗೆ ಬೆಣ್ಣೆಯಿಂದ ಬಂದ ವಿದ್ಯೆ! ಎಂದು ಸಚಿವರು ಕಿಡಿಕಾರಿದರು. ಸಾಯಿ ವೆಂಕಟೇಶ್ವರಕ್ಕೆ 550 ಎಕರೆ ಮಂಜೂರು ಮಾಡಿದ್ದೇನೆ ಎಂದು ಬೊಗಳೆ ಬಿಟ್ಟಿದ್ದೀರಿ. ನನ್ನ ಬರವಣಿಗೆ ಫೋರ್ಜರಿ ಆಗಿದೆ. ಪತ್ರಿಕೆಗಳ ವರದಿಗೆ ನಾನು ಉತ್ತರ ಕೊಡುತ್ತೇನೆ, ಪಲಾಯನ ನನ್ನ ಜಾಯಮಾನವಲ್ಲ. ಆದರೆ, ಆ ವರದಿಯನ್ನೇ ನೆತ್ತಿ ಮೇಲಿಟ್ಟುಕೊಂಡು ಉಪ್ಪಿನಕಾಯಿ ಚಪ್ಪರಿಸುವ ದೈನೇಸಿ ಸ್ಥಿತಿ ನಿಮಗೇಕೆ? ಎಂದು ಕುಟುಕಿದ್ದಾರೆ.

ಮೂಡದಲ್ಲಿ ನೀವು, ನಿಮ್ಮ ಸಕುಟುಂಬ ಪರಿವಾರ ಸರಕಾರಿ ಭೂಮಿಯನ್ನು ಹೇಗೆಲ್ಲಾ ಮುಕ್ಕಿತು ಎನ್ನುವುದಕ್ಕೆ ದಂಡಿದಂಡಿ ದಾಖಲೆಗಳೇ ಇವೆ. ನಿಮ್ಮ ಪಟಾಲಂ ಹೆಲಿಕಾಪ್ಟರ್ ನಲ್ಲಿ ಕದ್ದು ಸಾಗಿಸಿದ ದಾಖಲೆಗಳು ಸುಳ್ಳಾ? ಕಪ್ಪುಚುಕ್ಕೆಯನ್ನು ನಿಮ್ಮ ವೈಟ್ನರ್ ಅಳಿಸೀತಾ ಸಿದ್ದರಾಮಯ್ಯನವರೇ? ಎಂದು ಕುಮಾರಸ್ವಾಮಿ ಅವರು ಪ್ರಶ್ನಿಸಿದ್ದಾರೆ. ರಾಜ್ಯಪಾಲರಿಗೆ ಎಸ್‌ಐಟಿ ಬರೆದ ಪತ್ರ ಇಟ್ಟುಕೊಂಡು ಹಾರಾಟ ಮಾಡುತ್ತಿದ್ದೀರಿ ನೀವು. ಪತಂಗದ ಹಾರಾಟ ನೋಡಲಿಕ್ಕೆ ಚೆಂದ, ಕೆಳಗಿರುವ ಬೆಂಕಿಜ್ವಾಲೆ ಅದಕ್ಕೆ ಅರಿವಿರುವುದಿಲ್ಲ. ನಿಮ್ಮ ಬಗ್ಗೆ ನನಗೆ ಕನಿಕರವಿದೆ. ನಿಮ್ಮ ಆನಂದ ತಾತ್ಕಾಲಿಕ ಸಿದ್ದರಾಮಯ್ಯನವರೇ ಎಂದು ಎಚ್ಚರಿಕೆ ನೀಡಿದರು.

ಇಂದು ಬಾಹ್ಯಾಕಾಶ ದಿನ

ಬೆಂಗಳೂರು: ಭಾರತದ ಹೆಮ್ಮೆಯ ಚಂದ್ರಯಾನ-3ರ ವಿಕ್ರಮ್ ಲ್ಯಾಂಡರ್ ಚಂದ್ರನ ದಕ್ಷಿಣ ಧ್ರುವದ ಮೇಲೆ ಯಶಸ್ವಿಯಾಗಿ ಸ್ಪರ್ಶ ಮಾಡಿದ ಸ್ಮರಣಾರ್ಥವಾಗಿ ಪ್ರತಿ ವರ್ಷವೂ ಭಾರತ ಆ. 23ರಂದು ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು ಆಚರಿಸಲಿದ್ದು, ಭಾರತದ ಬಾಹ್ಯಾಕಾಶ ಸಾಧನೆಗಳ್ತ ಭವಿಷ್ಯದ ಅನ್ವೇಷಣೆಗಳ ಮಹತ್ವವನ್ನು ಸಾರಲು ಮುಖ್ಯವಾಗಿದೆ ಎಂದು ಬಾಹ್ಯಾಕಾಶ ವಿಶ್ಲೇಷಕ ಗಿರೀಶ್ ಲಿಂಗಣ್ಣ ಹೇಳಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಈ ಮಹತ್ವದ ಸಾಧನೆಯನ್ನು ಗುರುತಿಸಿ, ಗೌರವಿಸುವ ಸಲುವಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಆ.23ನ್ನು ರಾಷ್ಟ್ರೀಯ ಬಾಹ್ಯ ಕಾಶ ದಿನ ಎಂದು ಘೋಷಿಸಿದರು. ಭಾರತದ ಮೊದಲ ಬಾಹ್ಯಾಕಾಶ ದಿನಾಚರಣೆ ನಡೆಯಲಿದ್ದು, ಸರ್ಕಾರ ಭಾರತದ ಬಾಹ್ಯಾಕಾಶ ಸಾಧನೆಗಳನ್ನು ಪ್ರದರ್ಶಿಸಲು ಮತ್ತು ಯುವ ಜನರಲ್ಲಿ ಸ್ಫೂರ್ತಿ ತುಂಬಲು ಒಂದು ತಿಂಗಳ ಕಾಲದ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ತಿಳಿಸಿದ್ದಾರೆ.

ಈ ವರ್ಷದ ಸಮಾರಂಭ ಟಚಿಂಗ್ ಲೈವ್ ವೈಲ್ ಟಚಿಂಗ್ ದ ಮೂನ್ ಎನ್ನುವ ಘೋಷವಾಕ್ಯದಲ್ಲಿ ನಡೆಯುತ್ತದೆ. ಇಂಡಿಯಾಸ್ ಸ್ಪೇಸ್ ಸಾಗಾ ಎಂಬ ಧ್ಯೇಯವಾಕ್ಯವನ್ನು ಹೊಂದಿದೆ. ಬಾಹ್ಯಾಕಾಶ ದಿನದ ಸತ್ವವನ್ನು ಸುಂದರವಾಗಿ ವಿವರಿಸಲಿದೆ. ಭಾರತದ ಬಾಹ್ಯಾಕಾಶ ಅನ್ವೇಷಣೆಗಳು ಕೇವಲ ಅಸಾಧಾರಣ ವೈಜ್ಞಾನಿಕ ಸಾಧನೆಗಳಿಗೆ ಸೀಮಿತವಾಗಿರದೆ, ಭಾರತೀಯರ ದೈನಂದಿನ ಜೀವನದ ಮೇಲೂ ಧನಾತ್ಮಕ ಬದಲಾವಣೆ ಬೀರುತ್ತದೆ ಎನ್ನುವುದನ್ನು ಈ ಥೀಮ್ ಸಮರ್ಥವಾಗಿ ವಿವರಿಸುತ್ತದೆ ಎಂದರು.

ಬಾಹ್ಯಾಕಾಶ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ಭಾರತದ ನಡೆ ದೈನಂದಿನ ಜೀವನದ ಮೇಲೆ ಮಹತ್ವದ ಪ್ರಭಾವ ಬೀರಿದೆ. ಈ ಸಾಧನೆಗಳು ಸಂವಹನ ಮತ್ತು ಹವಮಾನ ಮುನ್ಸೂಚನೆಯಲ್ಲಿ ಅಭಿವೃದ್ಧಿ ತಂದು, ಸಂಚರಣೆ(ನ್ಯಾವಿಗೇಷನ್) ಹಾಗೂ ವಿಪತ್ತು ನಿರ್ವಹಣೆಗೆ ನೆರವು ನೀಡಿದೆ ಎಂದರು.

ಮುಖ್ಯ ಅಭಿಯಂತರರನ್ನ ಮುಂದುವರೆಸಬಾರದು

ಬೆಂಗಳೂರು: ಕರ್ನಾಟಕ ರಾಜ್ಯ ಕೊಳಗೇರಿ ಅಭಿವೃದ್ಧಿ ಮಂಡಳಿಯ ಮುಖ್ಯ ಅಭಿಯಂತರರಾಗಿ ವಯೋ ನಿವೃತ್ತಿ ಹೊಂದುತ್ತಿರುವ ಕಳಂಕಿತ ಭ್ರಷ್ಟ ಬಾಲರಾಜು ಸೇವೆಯನ್ನು ಯಾವುದೇ ಕಾರಣಕ್ಕೂ ಮುಂದುವರೆಸಬಾರದು ಎಂದು ವಸತಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಬಿಬಿಎಂಪಿ ಆಡಳಿತ ಪಕ್ಷದ ಮಾಜಿ ನಾಯಕ ಎನ್.ಆರ್ ರಮೇಶ್ ಆಗ್ರಹಿಸಿದರು.

ಈ ಕುರಿತು ಪ್ರಕಟಣೆಯಲ್ಲಿ ಮಾಹಿತಿ ನೀಡಿದ ಅವರು, ಕರ್ನಾಟಕ ರಾಜ್ಯ ಕೊಳಗೇರಿ ಅಭಿವೃದ್ಧಿ ಮಂಡಳಿಯ ಮುಖ್ಯ ಅಭಿಯಂತರರಾಗಿ ಕಾರ್ಯ ನಿರ್ವಹಿಸುತ್ತಿರುವ ಬಾಲರಾಜು ಆ.31 ರಂದು ವಯೋ ನಿವೃತ್ತಿ ಹೊಂದುತ್ತಿದ್ದು, ಇವರ ವಿರುದ್ಧ ಹಲವಾರು ಆರೋಪಗಳು ಇರುತ್ತದೆ. ತಮ್ಮ ಸೇವಾವಧಿಯಲ್ಲಿ ಹಲವಾರು ವಿವಾದಗಳಿಗೆ ಸಿಲುಕಿರುವ ಮತ್ತು ಭ್ರಷ್ಟಾಚಾರದ ಆರೋಪಗಳನ್ನು ಹೊತ್ತಿರುವ ಬಾಲರಾಜು ಅವರನ್ನು ನಿವೃತ್ತಿಯಾದ ನಂತರ 02 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ಮುಂದುವರೆಸಬೇಕೆಂದು ರಾಜ್ಯ ವಸತಿ ಸಚಿವ ಜಮೀರ್ ಅಹಮದ್ ರವರು ಪತ್ರ ಮುಖೇನ ಆಗ್ರಹಿಸಿರುವುದು ಆತಂಕಕಾರಿ ವಿಷಯವಾಗಿದ್ದು ಕೂಡಲೇ ಆದೇಶವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ. ಒಂದು ವೇಳೆ ಭ್ರಷ್ಟ ಅಧಿಕಾರಿ ಬಾಲರಾಜು ಅವರನ್ನು ಅದೇ ಸ್ಥಾನದಲ್ಲಿ ಗುತ್ತಿಗೆ ಆಧಾರದಲ್ಲಿ ಮುಂದುವರೆಸುವ ಆದೇಶವನ್ನು ನೀಡಿದ್ದೇ ಆದಲ್ಲಿ ಅದರ ವಿರುದ್ಧ ಕಾನೂನು ಹೋರಾಟ ನಡೆಸಲು ನಾವು ಸಿದ್ಧರಿದ್ದೇವೆ ಎಂದು ಎನ್.ಆರ್ ರಮೇಶ್ ಅವರು ಎಚ್ಚರಿಕೆ ನೀಡಿದ್ದಾರೆ.

ಹೊಸಕೋಟೆ ತಾಲೂಕಿನ ನಂದಗುಡಿಯಲ್ಲಿನ ಕರ್ನಾಟಕ ಪಬ್ಲಿಕ್ ಶಾಲೆಯ ಕಬ್ಬಡಿ ಕ್ರೀಡಾ ಪಟುಗಳು ಹೋಬಳಿ ಮಟ್ಟದ ಕಬ್ಬಡಿ ಪಂದ್ಯದಲ್ಲಿ ಗೆಲುವು ಸಾದಿಸುವ ಮೂಲಕ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ, ಈ ತಂಡವನ್ನು ಶಾಲೆಯ ಮುಖ್ಯ ಉಪಾಧ್ಯಾಯ ಕೃಷ್ಣಪ್ಪ, ತರಬೇತುದಾರ ಲಕ್ಷ್ಮಣ್, ಎಸ್ ಡಿ ಎಂ ಸಿ ಅಧ್ಯಕ್ಷ ಗಂಗಾಧರ್ ಹಾಗೂ ರಾಜ್ಯ ಮಟ್ಟದ ಕುಸ್ತಿ ಪಟು ಹಾಗೂ ಕಬ್ಬಡಿ ಆಟಗಾರ ಲಕ್ಷ್ಮಣ್ ಕುಮಾರ್ ಅಭಿನಂದಿಸಿದರು.

ಶಿರೂರು ಗುಡ್ಡ ಕುಸಿತ: ಸಂತ್ರಸ್ತರಿಗೆ ವಿಶೇಷ ಪರಿಹಾರ | ಸಂಸದರ ಮನವಿ ಪತ್ರ

ಕಾಗೇರಿ ಬೇಡಿಕೆಗೆ ಪ್ರಧಾನಿ ಮೋದಿ ಅಸ್ತು

ಅಂಕೋಲಾ: ಶಿರೂರು ಗುಡ್ಡ ಕುಸಿತದಲ್ಲಿ ಸಂತ್ರಸ್ತರಾದವರಿಗೆ ರಾಷ್ಟ್ರೀಯ ಪರಿಹಾರ ನಿಧಿಯಡಿ ವಿಶೇಷ ನೆರವು ಬಿಡುಗಡೆ ಮಾಡಿರುವುದಾಗಿ ಪ್ರಧಾನಿ ನರೇಂದ್ರ ಮೋದಿಯವರು ಉ.ಕ.ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ಪತ್ರ ಬರೆದು ತಿಳಿಸಿದ್ದಾರೆ.

ಈ ಕುರಿತಾಗಿ ಪ್ರಧಾನಿ ಅವರಿಂದ ಬಂದ ಪತ್ರದಲ್ಲಿ ಅವರು,2024 ರ ಜುಲೈ 31 ರ ನಿಮ್ಮ ಪತ್ರದಲ್ಲಿ ಭಾರಿ ಮಳೆಯ ನಂತರ ಕರ್ನಾಟಕದ ಅಂಕೋಲಾ ತಾಲೂಕಿನ ಶಿರೂರು ಗ್ರಾಮದಲ್ಲಿ ಗುಡ್ಡ ಕುಸಿತದಿಂದ ಆಗಿರುವ ಹಾನಿಯನ್ನು ಪ್ರಸ್ತಾಪಿಸಿ ಸಂತ್ರಸ್ತ ಕುಟುಂಬಗಳಿಗೆ ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಡಿ ವಿಶೇಷ ನೆರವು ನೀಡಲು ಮನವಿ ಮಾಡಿದ್ದೀರಿ.ಈ ಪತ್ರವನ್ನು ಸ್ವೀಕರಿಸಿದ್ದೇನೆ. ವಿಶೇಷ ನೆರವಿನ ರೂಪದಲ್ಲಿ ಪರಿಹಾರವನ್ನು ಮಂಜೂರು

ಮಾಡಲಾಗಿದೆ. ನಮ್ಮ ಸರ್ಕಾರದಿಂದ ಸಾಧ್ಯವಿರುವ ಎಲ್ಲ ಬೆಂಬಲವನ್ನು ನೀಡುವುದಾಗಿ ನಾನು ನಿಮಗೆ ಭರವಸೆ ನೀಡಲು ಬಯಸುತ್ತೇನೆ.ನನ್ನ ಬೆಂಬಲಮತ್ತು ಪ್ರಾರ್ಥನೆಗಳು ಪೀಡಿತ ಜನರೊಂದಿಗೆ ಇವೆ ಎಂದು ಹೇಳಿದ್ದಾರೆ.

ಪ್ರಧಾನಿಯಿಂದ ಬಂದ ಪತ್ರ ಈಗ ಶಿರೂರು ಸಂತ್ರಸ್ತರಲ್ಲಿ ಹೊಸ ಆಶಾಕಿರಣ ಮೂಡಿಸಿದೆ. ಶಿರೂರು ಗುಡ್ಡ ಕುಸಿತ ಮತ್ತು ಇದರಿಂದ ಬಾಧಿತ ಉಳುವರೆ ಗ್ರಾಮಕ್ಕೆ ಭೇಟಿ ನೀಡಿದ್ದ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಸಂತ್ರಸ್ತರಿಗೆ ಸಾಂತ್ವನ ಹೇಳಿ ಕೇಂದ್ರ ಸರ್ಕಾರದಿಂದ ಹೆಚ್ಚಿನ ನೆರವು ಒದಗಿಸುವ ಭರವಸೆ ನೀಡಿದ್ದರು. ಮಾಜಿ ಶಾಸಕಿ ರೂಪಾಲಿ ನಾಯ್ಕ ವಿಶೇಷ ಅನುದಾನಕ್ಕಾಗಿ ಸಂಸದರಲ್ಲಿ ಮನವಿ ಮಾಡಿದ್ದರು.ಜಿಲ್ಲಾ ಬಿಜೆಪಿ ಹಿಂದುಳಿದ ಮೋರ್ಚಾ ಅಧ್ಯಕ್ಷ ರಾಜೇಂದ್ರ ನಾಯ್ಕ ಸಹ ಸಂಸದ ಕಾಗೇರಿ ಅವರಿಗೆ ಮನವಿ ಸಲ್ಲಿಸಿ ಕೇಂದ್ರದಿಂದ ಪರಿಹಾರ ತಂದು ಸಂತ್ರಸ್ತರಿಗೆ ನೆರವಾಗಲು ಮನವಿ ಮಾಡಿದ್ದರು.

ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ವಿಶೇಷ ಪ್ರಯತ್ನದ ಫಲವಾಗಿ ಉ.ಕ ಜಿಲ್ಲೆಗೆ ಶಿರೂರು ದುರಂತವನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ ವಿಶೇಷ ಅನುದಾನ ಬಂದಂತಾಗುತ್ತಿದೆ.

ಡಿಕ್ಕಿ ಹೊಡೆಸಿ ದ್ವಿಚಕ್ರ ಸವಾರನ ಕೊಲೆ

ಬೆಂಗಳೂರು: ವಿದ್ಯಾರಣ್ಯಪುರ ಠಾಣೆ ವ್ಯಾಪ್ತಿಯಲ್ಲಿ ಕಾರಿಗೆ ದ್ವಿಚಕ್ರ ವಾಹನ ತಗುಲಿದೆ ಎಂಬ ಕಾರಣಕ್ಕೆ ಕೋಪಗೊಂಡ ಕಾರು ಚಾಲಕ ದ್ವಿಚಕ್ರ ವಾಹನವನ್ನು ಬೆನ್ನಟ್ಟಿದ್ದು, ಕಾರಿನಿಂದ ಡಿಕ್ಕಿ ಹೊಡೆದ ಪರಿಣಾಮ ದ್ವಿಚಕ್ರ ಸವಾರ ಸಾವನ್ನಪ್ಪಿದ್ದಾನೆ.

ಚಾಮುಂಡಿ ಲೇಔಟ್ ನಿವಾಸಿ ಮಹೇಶ್(21) ಮೃತ ದ್ವಿಚಕ್ರ ವಾಹನ ಸವಾರ. ಬುಧವಾರ ರಾತ್ರಿ 10 ಗಂಟೆ ಸುಮಾರಿಗೆ ಮಹೇಶ್, ಬಾಲಾಜಿ ಮತ್ತು ನಿಖಿಲ್ ಎಂಬುವರು ದ್ವಿಚಕ್ರ ವಾಹನದಲ್ಲಿ ಮೂವರು ಯುವಕರು ಕಾಫಿ ಕುಡಿದು ಮನೆಗೆ ತೆರಳುತ್ತಿದ್ದಾಗ ಹಿಂದೆ ಬರುತ್ತಿದ್ದ ಕಾರು ಜಾಗ ಬಿಡುವಂತೆ ಹಾರನ್ ಮಾಡಿದರೂ, ಕಿವಿಗೊಡದೆ ಚಲಾಯಿಸಿಕೊಂಡು ಹೋಗಿದ್ದರಿಂದ ಸಿಟ್ಟಿಗೆದ್ದ ಕಾರು ಚಾಲಕ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದ್ದಾರೆ ಎಂದು ಪೊಲೀಸರು ತಿಳಿಸಿದರು.

ಮಹೇಶ್ ದ್ವಿಚಕ್ರ ವಾಹನವನ್ನು ಚಲಾಯಿಸಿದ್ದಾಗ ಪಕ್ಕ ಬಂದ ಕಾರಿಗೆ ದ್ವಿಚಕ್ರ ವಾಹನ ತಗುಲಿದೆ. ಕಾರು ಚಲಾಯಿಸುತ್ತಿದ್ದ ಖಾಸಗಿ ಬ್ಯಾಂಕ್ ಮ್ಯಾನೇಜರ್ ಅರವಿಂದ್, ದ್ವಿಚಕ್ರ ವಾಹನವನ್ನು ನಿಲ್ಲಿಸುವಂತೆ ಹೇಳಿದ್ದಾರೆ. ಆದರೂ ಕಿವಿ ಕೊಡದೆ ಹಾಗೇ ಚಲಾಯಿಸಿಕೊಂಡು ಹೋಗಿದ್ದಾರೆ. ಇದರಿಂದ ಸಿಟ್ಟಿಗೆದ್ದ ಅರವಿಂದ್, ಬೆನ್ನಟ್ಟಿ ಹೋಗಿದ್ದಾರೆ. ಆ ವೇಳೆ ಹಿಂಬದಿ ಕುಳಿತಿದ್ದ ಇಬ್ಬರು ಗೆಳೆಯರು ತಿರುವಿನ ಬಳಿ ಕೆಳಗೆ ಬಿದ್ದಿದ್ದು, ತಪ್ಪಿಸಿಕೊಂಡು ಹೋಗಿದ್ದಾರೆ. ಬಳಿಕ ಮಹೇಶ್ ತನ್ನ ದ್ವಿಚಕ್ರ ವಾಹನವನ್ನು ಸಪ್ತಗಿರಿ ಲೇಔಟ್‌ಗೆ ತಿರುಗಿಸಿದ್ದಾನೆ. ಆದರೂ ಬಿಡದ ಅರವಿಂದ್ ಬೆನ್ನಟ್ಟಿ ಆತನ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದ್ದಾರೆ. ಇದರಿಂದ ಮಹೇಶ್ ಮನೆಯೊಂದರ ಕಾಂಪೌಂಡ್‌ಗೆ ಡಿಕ್ಕಿಯಾಗಿ ಉರುಳಿ ಬಿದ್ದಿದ್ದಾನೆ. ಮಹೇಶ್ ಹೆಲ್ಮೆಟ್ ಧರಿಸದ ಕಾರಣ ತಲೆಗೆ ಗಂಭೀರ ಪೆಟ್ಟಾಗಿದ್ದು, ಕಾರು ಚಲಾಯಿಸುತ್ತಿದ್ದ ಅರವಿಂದ್ ಮತ್ತು ಆತನ ಸ್ನೇಹಿತ ಚೆನ್ನಕೇಶವ ಕೂಡಲೇ ಮಹೇಶ್‌ನನ್ನು ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆಗ ವೈದ್ಯರು ಮೃತಪಟ್ಟಿರುವುದು ದೃಢಪಡಿಸಿದ್ದಾರೆ. ಮೊದಲು ಅಪಘಾತವೆಂದು ಮೇಲ್ನೋಟಕ್ಕೆ ಸುದ್ದಿ ತಿಳಿದಿದ್ದು, ನಂತರ ಪರಿಶೀಲನೆ ನಡೆಸಿದಾಗ ಇದು ಕೊಲೆ ಮಾಡಿರುವುದು ಎಂದು ತಿಳಿದುಬಂದಿದೆ. ಈ ಹಿನ್ನೆಲೆಯಲ್ಲಿ ಕೊಲೆ ಪ್ರಕರಣ ದಾಖಲಿಸಿಕೊಂಡು ಅರವಿಂದ್ ಆತನ ಸ್ನೇಹಿತ ಚೆನ್ನಕೇಶವನನ್ನು ಬಂಧಿಸಿ, ತನಿಖೆ ಮುಂದುವರೆಸಲಾಗಿದೆ ಎಂದು ಪೊಲೀಸರು ಹೇಳಿದರು.

ನಾಳೆ ಪ್ರತಿಭಾ ಪುರಸ್ಕಾರ

ಹೊಸಕೋಟೆ: ತಾಲೂಕು ವಹ್ನಿಕುಲತಿಗಳ ಸಂಗದ ವತಿಯಿಂದ ಸಮುದಾಯದ ಪ್ರತಿಭಾವಂತ ವಿಧ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಗಸ್ಟ್ 24 ರಂದು ಬೆಳಗ್ಗೆ 10.30 ಕ್ಕೆ ನಗರದ ಎಚ್ ಜೆ ಎಸ್ ಎಸ್ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ, ಈ ಕಾರ್ಯಕ್ರಮದಲ್ಲಿ ಶಿವನಾಪುರ ಆಧಿಶಕ್ತಿ ಮಹಾ ಸಂಸ್ಥಾನದ ಮಠದ ಶ್ರೀ ಪ್ರಣವಾನಂದಪುರಿ ಸ್ವಾಮಿಜಿ, ಮಾಜಿ ಸಂಸದ ಬಿ ಎನ್ ಬಚ್ಚೇಗೌಡ, ಕಿಯೋನಿಕ್ಸ್ ಅಧ್ಯಕ್ಷ ಹಾಗೂ ಶಾಸಕ ಶರತ್ ಬಚ್ಚೇಗೌಡ ಸೇರಿ ಹಲವರು ಬಾಗವಹಿಸಲಿದ್ದಾರೆ.



ಹೊಸಕೋಟೆಯ ಗುರು ಸೇವಾ ಸಂಘದ ವತಿಯಿಂದ ನೆಡೆಯುತ್ತಿರುವ ಶ್ರೀ ರಾಘವೇಂದ್ರ ಸ್ವಾಮಿಗಳ ಮಹೋತ್ಸವದಲ್ಲಿ ಬುದವಾರ ಶ್ರೀ ರಾಘವೇಂದ್ರ ಸ್ವಾಮಿಗಳ ರಥೋತ್ಸವ ವಿಜೃಂಬಣೆಯಿಂದ ನೆಡೆಸಲಾಯಿತು, ಈ ಕಾರ್ಯಕ್ರಮಕ್ಕೆ ಶಾಸಕ ಶರತ್ ಬಚ್ಚೇಗೌಡ ಚಾಲನೆ ನೀಡಿದರು.

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಾರ್ಹವಾದವು. ಆದರೆ ಅದರಲ್ಲಿ ಪ್ರತಿಪಾದಿತವಾದ ವಸ್ತು, ವಿಷಯ ವಿಚಾರಗಳು ಜಾಹೀರಾತುದಾರರ ಅಭಿಪ್ರಾಯ ಆಗಿರುತ್ತವೆಯೇ ಹೊರತು ಪತ್ರಿಕೆಯ ಅಭಿಪ್ರಾಯವಾಗಿರುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಗೌರವಾನ್ವಿತ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕನಕಪುರ.

ಇ.ಎಕ್ಸ್. ನಂ: 42/2023.

ಡಿಕ್ರಿದಾರರು : ಶ್ರೀಮತಿ ಬೇಬಮ್ಮ ಕೋಂ ಜಯರಾಮು ವಯಸ್ಸು 67 ವರ್ಷ, ವಾಸ : ಸಿಂಧ್ಯಾನಗರ ಹಾರೋಹಳ್ಳಿ, ಗ್ರಾಮ ಮತ್ತು ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ.

V/S

ತೀರ್ಪುಋಣಿದಾರರು : 1. ಪ್ರಕಾಶ್ ಬಿನ್ ಕರಿಯಪ್ಪ ವಯಸ್ಸು 50 ವರ್ಷ, 2. ಶ್ರೀ ಶಿವಕುಮಾರ್ ಬಿನ್ ಪ್ರಕಾಶ್ ವಯಸ್ಸು 25 ವರ್ಷ, ಇಬ್ಬರ ವಾಸ : ರಂಗನಾಥ ಲೇಔಟ್, ಹಾರೋಹಳ್ಳಿ ಗ್ರಾಮ ಮತ್ತು ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ.

ಪತ್ರಿಕಾ ಪ್ರಕಟಣೆ

**ಈ ಮೂಲಕ ಮೇಲ್ಕಂಡ 1 ಮತ್ತು 2ನೇ ತೀರ್ಪುಋಣಿದಾರರಿಗೆ ತಿಳಿಯಪಡಿಸುವುದೇನೆಂದರೆ, ಡಿಕ್ರಿ ಹೋಲ್ಡರ್ ರವರು ಮಾನ್ಯ ಕನಕಪುರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ, ಅಮಲ್ಜಾರಿ ಸಂಖ್ಯೆ:42/2023ರ ಪ್ರಕರಣದಲ್ಲಿ ರಾಮನಗರ ಜಿಲ್ಲೆ, ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ನಿವೇಶನದ ಖಾನೇಶುಮಾರಿ: ನಂ.3160/3240/9/12 ಸ್ವತ್ತಿನ ಸಂಖ್ಯೆ: 1529002037014240637ರ ವಿಸ್ತೀರ್ಣ ಪೂರ್ವ- ಪಶ್ಚಿಮದಲ್ಲಿ 12.19 ಮೀಟರ್‌ಗಳು ಮತ್ತು ಉತ್ತರ-ದಕ್ಷಿಣ 11.13 ಮೀಟರ್ ಗಳು, ಸ